**ದಿನಾಂಕ: 03.12.2022 ರಂದು ಮದ್ಯಾಹ್ನ 12:00 ಗಂಟೆಗೆ ವಾರ್ಡ್ ಸಂಖ್ಯೆ 203 (ಹಳೆ ವಾರ್ಡ್ ಸಂಖ್ಯೆ 180) ಬನಶಂಕರಿ ದೇವಸ್ಥಾನ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

*ಹಾಜರಿದ್ದ ಅಧಿಕಾರಿಗಳು:-*

1. ಶ್ರೀ. ಸಿ. ಆರ್. ಸತೀಶ್ ಕುಮಾರ್ – ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು.
2. ಶ್ರೀ. ಮಂಜುನಾಥ್ ವೆಂಕಣ್ಣ ನಾಯಕ – ಸಹಾಯಕ ಅಭಿಯಂತರರು (ವಾರ್ಡ್ 203(180) ಬನಶಂಕರಿ ದೇವಸ್ಥಾನ) (ಕಿಯೋನಿಕ್ಸ್)
3. ಶ್ರೀ. ಮಹಮದ್ ಸಾದಿಕ್ – ಕಿರಿಯ ಆರೋಗ್ಯ ಪರಿವೀಕ್ಷಕರು

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 203 (ಹಳೆ ವಾರ್ಡ್ ಸಂಖ್ಯೆ 180) ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು (ಕಿಯೋನಿಕ್ಸ್) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಈ ಹಿಂದಿನ ಸಭೆಯಲ್ಲಿ ನಡೆದ ವಿಷಯಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಲಾಯಿತು. ಅಧಿಕಾರಿಗಳಿಗೆ ನಿಗಧಿತ ಅವಧಿಯೊಳಗೆ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿ, ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

1. ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ಡೆಬ್ರಿಸ್ ವಿಲೇವಾರಿ ಬಗ್ಗೆ.

ಸಾರ್ವಜನಿಕರು ಟೀಚರ್ಸ್ ಕಾಲೋನಿಯಲ್ಲಿ ಕುಡಿಯುವ ನೀರಿನ ಪೈಪ್ ಒಡೆದುಹೋಗಿ ಕುಡಿಯುವ ನೀರಿಗೆ ಸಮಸ್ಯೆಯಾಗಿರುತ್ತದೆ ಎಂದು ದೂರು ಬಂದ ಹಿನ್ನಲೆಯಲ್ಲಿ ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ ರವರು ಸರಿಪಡಿಸಲಾಗಿರುತ್ತದೆ ಎಂದು ತಿಳಿಸಿದರು.

2. ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ.

ವಾರ್ಡ್ ವ್ಯಾಪ್ತಿಯ 9ನೇ ಮುಖ್ಯರಸ್ತೆಯಲ್ಲಿರುವ ಬಿಎಸ್‌ಎನ್‌ಎಲ್ ಕಚೇರಿಯ ಹತ್ತಿರ ಕಸದ ರಾಶಿ ಇರುವುದಾಗಿ ಬಿಎಸ್‌ಎನ್‌ಎಲ್ ರವರು ದೂರು ನೀಡಿರುತ್ತಾರೆ. ಅದರಂತೆ ಕಿರಿಯ ಆರೋಗ್ಯ ಪರಿವೀಕ್ಷಕರು ಸದರಿ ಕಸದ ರಾಶಿಯನ್ನು ತೆರವುಗೊಳಿಸಲಾಗಿರುತ್ತದೆ. ಟೀಚರ್ಸ್ ಕಾಲೋನಿಯ 6ನೇ ಅಡ್ಡರಸ್ತೆಯ ಖಾಸಗಿ ಸ್ವತ್ತಿನಲ್ಲಿ ಸೊಳ್ಳೆಗಳ ಸಮಸ್ಯೆ ಜಾಸ್ತಿಯಾಗಿ ಸುತ್ತಮುತ್ತಲಿನ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುತ್ತದೆ. ಆದ್ದರಿಂದ ಸದರಿ ಸ್ವತ್ತಿ ಔಷಧಿ ಸಂಪಡಿಸಲಾಗಿರುತ್ತದೆ ಎಂದು ಕಿರಿಯ ಆರೋಗ್ಯ ಪರಿವೀಕ್ಷಕರು ರವರು ತಿಳಿಸಿರುತ್ತಾರೆ.

ಹಿಂದಿನ ಸಭೆಯಲ್ಲಿ ವಾರ್ಡ್ ವ್ಯಾಪ್ತಿಯ ಉಮಾರ್‌ಭಾಗ್ ಲೇಔಟ್‌ನ ಪೈಪ್‌ಲೈನ್ ರಸ್ತೆಯಲ್ಲಿ ಗುಂಡಿಗಳು ಹೆಚ್ಚಾಗಿದ್ದು ಸದರಿ ರಸ್ತೆಯಲ್ಲಿ ವಾಹನಗಳು ಸಂಚರಿಸಲು ಕಷ್ಟಕರವಾಗಿರುತ್ತದೆ. ಆದ್ದರಿಂದ ಸದರಿ ರಸ್ತೆಯನ್ನು ಕೂಡಲೇ ಸರಿಪಡಿಸಿ ಸಾರ್ವಜನಿಕ ಓಡಾಟಕ್ಕೆ ಅನುಕೂಲ ಮಾಡಿಕೊಡುವಂತೆ ಸಾರ್ವಜನಿಕರು ಕೋರಿದ್ದರು. ಅದರಂತೆ ಉಮಾರ್‌ಭಾಗ್ ಲೇಔಟ್‌ನ ಪೈಪ್‌ಲೈನ್ ರಸ್ತೆಯನ್ನು ಡಾಂಬರೀಕರಣ ಮಾಡಿ ಸಆರ್ವಜನಿಕರ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲಾಗಿರುತ್ತದೆ.

ಮು.ತಿ.ನೋ

ಉಮಾರ್‌ಭಾಗ್ ಲೇಔಟ್ ಮುಖ್ಯರಸ್ತೆಯಲ್ಲಿರುವ ಖಾಲಿ ಸೈಟ್‌ನ ಮುಂಭಾಗದಲ್ಲಿರುವ ಚರಂಡಿಯಲ್ಲಿ ಹೂಳು ತುಂಬಿದ್ದು ಸದರಿ ಚರಂಡಿಯಲ್ಲಿ ಹರಿಯುವ ನೀರು ರಸ್ತೆಯಲ್ಲಿ ಹರಿಯುತಿದ್ದು ಸಾರ್ವಜನಿಕರಿಗೆ ತುಂಬಾ ತೊಂದರೆಯಾಗಿರುತ್ತದೆ ಎಂದು ದೂರು ಬಂದ ಹಿನ್ನಲೆಯಲ್ಲಿ ಸದರಿ ಚರಂಡಿಯಲ್ಲಿ ಹೂಳು ತೆಗೆದು ನೀರು ಸರಾಗವಾಗಿ ಹರಿಯುವಂತೆ ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗಿರುತ್ತದೆ ಎಂದು ಸಹಾಯಕ ಅಭಿಯಂತರರು ರವರು ತಿಳಿಸಿದರು.

ಗಂಗಾಧರನಗರ ಕನಕಪುರ ರಸ್ತೆಯ ಚರಂಡಿಯು ತುಂಬಿ ರಸ್ತೆಯಲ್ಲಿ ನೀರು ಹರಿಯುತ್ತಿರುತ್ತದೆ ಎಂದು ಸಾರ್ವಜನಿಕರು ತಿಳಿಸಿದ ಮೇರೆಗೆ ರಸ್ತೆ ಮತ್ತು ಮೂಲಭೂತ ಸೌಕರ್ಯ ರವರು ಸದರಿ ಚರಂಡಿಯನ್ನು ಸರಿಪಡಿಸಲಾಗಿರುತ್ತದೆ ಎಂದು ತಿಳಿಸಿದರು.

ಮತದಾರರ ಗುರುತಿನ ಚೀಟಿಗೆ ಆಧಾರ್ ಜೋಡಣೆ ಮಾಡುವುದು ಹಾಗೂ 2023ನೇ ಸಾಲಿನ ಮತದಾರರ ಪಟ್ಟಿ ಪರಿಷ್ಕರಣೆಯ ಕಾರ್ಯ ನಡೆಯುತ್ತಿದ್ದು, ವಾರ್ಡ್ ವ್ಯಾಪ್ತಿಯ ಮತದಾರರ ಪಟ್ಟಿಯಲ್ಲಿ ಹೆಸರು ನೊಂದಾಯಿಸಲು ನಮೂನೆ-6, ತೆಗೆದುಹಾಕಲು ನಮೂನೆ-7 ಮತ್ತು ತಿದ್ದುಪಡಿಗೊಳಿಸಲು ನಮೂನೆ-8 ರಲ್ಲಿ ಅರ್ಜಿಯನ್ನು ಸಲ್ಲಿಸುವಂತೆ ಸಾರ್ವಜನಿಕರಿಗೆ ಕಂದಾಯ ಇಲಾಖೆ ಅಧಿಕಾರಿಗಳು ವಿವರಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿದಿನ ಕಸವನ್ನು ಸ್ವಚ್ಛಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಸೂಚಿಸಲಾಯಿತು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಾದ ಶ್ರೀ. ಸಿ. ಆರ್. ಸತೀಶ್ ಕುಮಾರ್ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Satish Kumar

ನೋಡೆಲ್ ಅಧಿಕಾರಿ
ವಾರ್ಡ್ ಸಂಖ್ಯೆ 203
ಬನಶಂಕರಿ ದೇವಸ್ಥಾನ